**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 137 ಎಇಎಸ್ 2022

ಕರ್ನಾಟಕ ಸರ್ಕಾರ ಸಚಿವಾಲಯ,
ಕೊ.ಸಂ.454, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 19.05.2022

# ಸುತ್ತೋಲೆ

ವಿಷಯ: ರಾಜ್ಯ ಸರ್ಕಾರದ ಕಛೇರಿಗಳಲ್ಲಿ ಹೊರಗುತ್ತಿಗೆ ನೇಮಕಾತಿಯಲ್ಲಿ (Outsourcing) ಶೇ.33ರಷ್ಟು ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳುವ ಬಗ್ಗೆ ಸೂಚನೆಗಳು.

*****

ರಾಜ್ಯ ಸರ್ಕಾರದ ಕಚೇರಿಗಳಲ್ಲಿನ ವಾಹನ ಚಾಲಕರು, ಡಾಟಾ ಎಂಟ್ರಿ ಆಪರೇಟರ್, ಸ್ವಚ್ಛತಾ ಸಿಬ್ಬಂದಿ, ಗ್ರೂಪ್ ಡಿ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ (Outsourcing) ಭರ್ತಿ ಮಾಡಿಕೊಳ್ಳುವುದು ಸರ್ಕಾರದ ಇತ್ತೀಚಿನ ಅಂಗೀಕೃತ ಕಾರ್ಯನೀತಿಯಾಗಿರುತ್ತದೆ. ಮಹಿಳೆಯರ ಸಬಲೀಕರಣ ಮತ್ತು ಅವರಿಗೆ ಸಾಮಾಜಿಕ ನ್ಯಾಯ ಮತ್ತು ಸಮಾನ ಉದ್ಯೋಗಾವಕಾಶಗಳನ್ನು ಒದಗಿಸುವ ದೃಷ್ಟಿಯಿಂದ ರಾಜ್ಯ ಸರ್ಕಾರವು 1996ರಲ್ಲಿಯೇ ರಾಜ್ಯ ಸಿವಿಲ್ ಸೇವೆಗಳಲ್ಲಿ ಶೇ.30ರಷ್ಟು ನೇರ ನೇಮಕಾತಿ ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಗೆ ಮೀಸಲಾಗಿರಿಸಿದೆ.

ಹೊರಗುತ್ತಿಗೆ ಮುಖಾಂತರ ಪಡೆಯಲಾಗುವ ಸೇವೆಗಳನ್ನು ಮಹಿಳೆಯರು ಕೂಡ ಸಮರ್ಥರಾಗಿ ನಿರ್ವಹಿಸಬಲ್ಲವರಾಗಿರುತ್ತಾರೆ. ಆದಕಾರಣ ರಾಜ್ಯ ಸರ್ಕಾರದ ಕಚೇರಿಗಳಲ್ಲಿ ಹೊರಗುತ್ತಿಗೆ ಮುಖಾಂತರ ಪಡೆಯಲಾಗುವ ಸೇವೆಗಳಲ್ಲಿ ಹಾಗೂ ಹುದ್ದೆಗಳಲ್ಲಿ ಶೇ.33ರಷ್ಟು ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಂದ ಭರ್ತಿ ಮಾಡಿಕೊಳ್ಳುವಂತೆ ಸರ್ಕಾರದ ಎಲ್ಲಾ ಇಲಾಖೆಗಳಿಗೆ ಈ ಮೂಲಕ ಸೂಚನೆಗಳನ್ನು ನೀಡಲಾಗಿದೆ. ಡಾಟಾ ಎಂಟ್ರಿ ಆಪರೇಟರ್, ಗ್ರೂಪ್-ಡಿ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಪಡೆಯುವ ಟೆಂಡರ್ ಪ್ರಕಟಣೆಯಲ್ಲಿಮತ್ತು ಹೊರಗುತ್ತಿಗೆ ಏಜನ್ಸಿಗಳೊಂದಿಗೆ ಮಾಡಿಕೊಳ್ಳಲಾಗುವ ಒಪ್ಪಂದದಲ್ಲಿ ಈ ಅಂಶವನ್ನು ಸೇರಿಸಲು ಸಂಬಂಧಪಟ್ಟ ಟೆಂಡರ್ ಆಹ್ವಾನಿಸುವ ಪ್ರಾಧಿಕಾರಗಳು ಕ್ರಮವಹಿಸುವುದು.

ಮೇಲಿನ ಸೂಚನೆಗಳನ್ನು ಸ್ವಾಯತ್ತ ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ಸ್ಥಳೀಯ ಸಂಸ್ಥೆಗಳು ಹಾಗೂ ಇನ್ನಿತರೆ ಸರ್ಕಾರಿ ವಲಯದ ಅಂಗ ಸಂಸ್ಥೆಗಳು ಕೂಡ ಪಾಲಿಸತಕ್ಕದ್ದು. ಈ ಸಂಬಂಧ ಸರ್ಕಾರದ ಎಲ್ಲಾ ಆಡಳಿತ ಇಲಾಖೆಗಳ ಕಾರ್ಯದರ್ಶಿಗಳು ತಮ್ಮ ವ್ಯಾಪ್ತಿಗೆ ಒಳಪಡುವ ಕ್ಷೇತ್ರ ಇಲಾಖೆಗಳು ಮತ್ತು ಸರ್ಕಾರದ ಅಂಗಸಂಸ್ಥೆಗಳಿಗೆ ಅಗತ್ಯ ಸೂಚನೆಗಳನ್ನು ನೀಡುವುದು. ಈ ಸೂಚನೆಗಳನ್ನು ಕಾರ್ಯಗತಗೊಳಿಸುವಲ್ಲಿ ಯಾವುದೇ ತೊಂದರೆಗಳು ಉದ್ಭವಿಸಿದಲ್ಲಿ ಸಂಬಂಧಪಟ್ಟ ಇಲಾಖಾ ಕಾರ್ಯದರ್ಶಿಗಳು ಅವುಗಳನ್ನು ಪರಿಹರಿಸತಕ್ಕದ್ದು.

(ಪಿ. ರವಿ ಕುಮಾರ್),
ಸರ್ಕಾರದ ಮುಖ್ಯ ಕಾರ್ಯದರ್ಶಿ,

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ ಗಳು.
4. ಸರ್ಕಾರದ ಎಲ್ಲಾ ಇಲಾಖೆಗಳ ಮುಖ್ಯಸ್ಥರು/ಮುಖ್ಯಸ್ಥರುಗಳು, ರಾಜ್ಯ ಸರ್ಕಾರದ ವ್ಯಾಪ್ತಿಯ ಎಲ್ಲಾ ಸ್ವಾಯತ್ತ ಸಂಸ್ಥೆಗಳು,ವಿಶ್ವವಿದ್ಯಾಲಯಗಳು, ಸ್ಥಳೀಯ ಸಂಸ್ಥೆಗಳು ಹಾಗೂ ಇನ್ನಿತರ ಸರ್ಕಾರಿ ವಲಯದ ಅಂಗ ಸಂಸ್ಥೆಗಳು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

mEntor's